**ಕರ್ನಾಟಕ ಸರ್ಕಾರ**

**ಸಮಗ್ರ ಮಕ್ಕಳ ರಕ್ಷಣಾ ಯೋಜನೆ**

ಸಂ:ಕೆಎಸ್‌ಐಸಿಪಿಎಸ್/ಕೋವಿಡ್-19/63/2020-21

ನಿರ್ದೇಶನಾಲಯ
ಸಮಗ್ರ ಮಕ್ಕಳ ರಕ್ಷಣಾ ಯೋಜನೆ
ಬೆಂಗಳೂರು.
ದಿನಾಂಕ: 30.04.2020

ಜಿಲ್ಲಾ ಮಕ್ಕಳ ರಕ್ಷಣಾಧಿಕಾರಿಗಳು,
ಜಿಲ್ಲಾ ಮಕ್ಕಳ ರಕ್ಷಣಾ ಘಟಕ
30 ಜಿಲ್ಲೆಗಳು.

ಮಾನ್ಯರೇ,

ವಿಷಯ: ಸಮಗ್ರ ಮಕ್ಕಳ ರಕ್ಷಣಾ ಯೋಜನೆಯಡಿ ಬರುವ ಮಕ್ಕಳ ಪಾಲನಾ ಸಂಸ್ಥೆಗಳಲ್ಲಿರುವ ಮಕ್ಕಳಿಗಾಗಿ ವಿವಿಧ ಚಟುವಟಿಕೆಗಳನ್ನು ಏರ್ಪಡಿಸುವ ಕುರಿತು.

.....

ಮೇಲಿನ ವಿಷಯಕ್ಕೆ ಸಂಬಂಧಿಸಿದಂತೆ, ಕೋವಿಡ್-19 ತುರ್ತು ಪರಿಸ್ಥಿತಿಯ ಹಿನ್ನೆಲೆಯಲ್ಲಿ ಸಮಗ್ರ ಮಕ್ಕಳ ರಕ್ಷಣಾ ಯೋಜನೆಯಡಿ ಬರುವ ಮಕ್ಕಳ ಪಾಲನಾ ಸಂಸ್ಥೆಗಳಲ್ಲಿನ ಮಕ್ಕಳನ್ನು ಸದಾ ಚಟುವಟಿಕೆಯಿಂದ ಹಾಗೂ ಲವಲವಿಕೆಯಿಂದ ಇರುವಂತೆ ನೋಡಿಕೊಳ್ಳುವುದು ತುಂಬಾ ಅವಶ್ಯಕವಾಗಿರುತ್ತದೆ. ಕೋವಿಡ್-19 ಬಗೆಗಿನ ಭಯ-ಆತಂಕ ಹೋಗಲಾಡಿಸಲು, ಮಕ್ಕಳಲ್ಲಿನ ಸುಪ್ತ ಪ್ರತಿಭೆಯನ್ನು ಗುರುತಿಸಲು ಹಾಗೂ ಮಕ್ಕಳು ಹೊಸದಾಗಿ ಏನನ್ನಾದರೂ ಕಲಿಯಲು ಈಗ ಇರುವ ಸಮಯವನ್ನು ಸದುಪಯೋಗಪಡಿಸಿಕೊಳ್ಳಲು ಯೋಜಿಸಿ ಮೇ-2020ರ ಮಾಹೆಗಾಗಿ ವಿವಿಧ ಸೃಜನಾತ್ಮಕ ಚಟುವಟಿಕೆಗಳ ವೇಳಾಪಟ್ಟಿಯನ್ನು ಮಕ್ಕಳ ಜಾಗೃತಿ, ಎನ್‌ಜಿಒ ಇವರ ಸಹಯೋಗದೊಂದಿಗೆ ತಯಾರಿಸಿ ಈ ಪತ್ರಕ್ಕೆ ಲಗತ್ತಿಸಿ ಕಳುಹಿಸಲಾಗಿದೆ. ಸದರಿ ವೇಳಾಪಟ್ಟಿಯಲ್ಲಿ ತಿಳಿಸಿದಂತೆ ಚಟುವಟಿಕೆಗಳನ್ನು ಹಮ್ಮಿಕೊಳ್ಳುವುದು ಹಾಗೂ ಇತರೆ ಆಸಕ್ತಿದಾಯಕ ಮತ್ತು ಸೃಜನಾತ್ಮಕ ಚಟುವಟಿಕೆಗಳನ್ನು ಜಿಲ್ಲಾ ಮಕ್ಕಳ ರಕ್ಷಣಾಧಿಕಾರಿಗಳು ಮತ್ತು ಅಧೀಕ್ಷಕರು ಆಯಾ ಮಕ್ಕಳ ಪಾಲನಾ ಸಂಸ್ಥೆಗಳವರು ಗುರುತಿಸಿದಲ್ಲಿ ಅವುಗಳನ್ನು ಸಹ ಕೈಗೊಳ್ಳಬಹುದಾಗಿದೆ. ಚಟುವಟಿಕೆಗಳನ್ನು ನಡೆಸಿದ ಬಗ್ಗೆ ವರದಿಯನ್ನು ಮೇ-2020ರ ಅಂತ್ಯದಲ್ಲಿ ಸಲ್ಲಿಸುವುದು.

ಮಕ್ಕಳಿಗಾಗಿ ವಿವಿಧ ಚಟುವಟಿಕೆಗಳ ವೇಳಾಪಟ್ಟಿಯನ್ನು ತಯಾರಿಸಲು ಸಹಕರಿಸಿದ ಮಕ್ಕಳ ಜಾಗೃತಿ ಎನ್‌ಜಿಒ ಇವರಿಗೆ ಧನ್ಯವಾದಗಳು.

ತಮ್ಮ ವಿಶ್ವಾಸಿ,

30.04.2020

ನಿರ್ದೇಶಕರು
ಸಮಗ್ರ ಮಕ್ಕಳ ರಕ್ಷಣಾ ಯೋಜನೆ
ಬೆಂಗಳೂರು.